4647 (5115) ಶ್ರೀ ಐವಾನ್ ನಿಗ್ಲಿ (ನಾಮಾಂಕಿತ) :– ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಧಾನಸೌಧದ ಹತ್ತಿರ ಹೆಲಿಪ್ಯಾಡ್‌ನ್ನು ನಿರ್ಮಿಸುವ ಪ್ರಸ್ತಾವನೆ ಇದೆಯೇ;

ಆ) ಹಾಗಿದ್ದಲ್ಲಿ, ಪ್ರಸ್ತಾಪಿಸಿರುವ ಸ್ಥಳ/ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು;

ಇ) ಸ್ಥಳದ ಕೊರತೆಯ ಕಾರಣ ಲಿಫ್ಟ್ ಸೌಕರ್ಯ ಒದಗಿಸಿ ಹೆಲಿಪ್ಯಾಡನ್ನು ಪಿಲ್ಲರ್‌ಗಳ ಮೇಲೆ ನಿರ್ಮಿಸಲಾಗುವುದೆ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ಪ್ರಸ್ತುತ ವಿಧಾನಸೌಧದ ಹತ್ತಿರ ಹೆಲಿಪ್ಯಾಡ್‌ನ್ನು ನಿರ್ಮಿಸುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಸ್ಥಳದ ಕೊರತೆಯ ಕಾರಣ ಲಿಫ್ಟ್ ಸೌಕರ್ಯ ಒದಗಿಸಿ ಹೆಲಿಪ್ಯಾಡನ್ನು ಪಿಲ್ಲರ್‌ಗಳ ಮೇಲೆ ನಿರ್ಮಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

4648 (5488) ಶ್ರೀ ಕಳಕಪ್ಪ ಗುರುಶಾಂತಪ್ಪ ಬಂಡಿ (ರೋಣ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೋಣ ತಾಲ್ಲೂಕಿನಲ್ಲಿರುವ ಸರ್ಕಾರಿ ವಿದ್ಯಾರ್ಥಿನಿಲಯಗಳು ಎಷ್ಟು ; ಅವು ಯಾವುವು;

ಆ) ಈ ವಿದ್ಯಾರ್ಥಿನಿಲಯಗಳಿಗೆ ಸರಿಯಾಗಿ ಆಹಾರ ಧಾನ್ಯ ಪೂರೈಕೆಯಾಗದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಆಹಾರ ಧಾನ್ಯ ಸರಿಯಾಗಿ ಪೂರೈಕೆಯಾಗದಿರುವುದಕ್ಕೆ ಕಾರಣಗಳೇನು;

ಈ) ಮುಂದೆ ಆಹಾರ ಧಾನ್ಯವನ್ನು ಸರಿಯಾಗಿ ಪೂರೈಕೆ ಮಾಡುವಲ್ಲಿ ಕೈಗೊಂಡಿರುವ ಕ್ರಮಗಳೇನು?

ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ರೋಣ ತಾಲ್ಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗಾಗಿ ಒಟ್ಟು 9 ವಿದ್ಯಾರ್ಥಿನಿಲಯ ಮತ್ತು ಹಿಂದುಳಿದ ವರ್ಗಗಳ ಇಲಾಖೆಯು

ಹಿಂದುಳಿದ ವರ್ಗದವರಿಗಾಗಿ 7 ವಿದ್ಯಾರ್ಥಿ ನಿಲಯ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯು 1 ವಿದ್ಯಾರ್ಥಿನಿಲಯ ನಡೆಯುತ್ತಿವೆ, ಅದರ ವಿವರ ಕೆಳಕಂಡಂತಿದೆ.

ಪರಿಶಿಷ್ಟ ಜಾತಿ ವಿದ್ಯಾರ್ಥಿನಿಲಯ

ಕ್ರ.ಸಂ	ವಿದ್ಯಾರ್ಥಿ ನಿಲಯದ ವಿವರ	ಮಂಜೂರಾತಿ ಸಂಖ್ಯೆ
I	**ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು**	
1	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಗಜೇಂದ್ರಗಡ	50
2	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಜಕ್ಕಲಿ	50
3	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಕೌಜಗೇರಿ	50
4	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಮೆಣಸಗಿ	50
5.	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ರಾಜೂರ	50
6	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಸೂಡಿಗ್ರಾಮ	50
7	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ, ಗಜೇಂದ್ರಗಡ	50
8	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ, ರೋಣ	40
II	**ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು**	
9	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ರೋಣ	50

ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯ

ಕ್ರ.ಸಂ	ವಿವರ	ಬಾಲಕ/ಬಾಲಕಿ	ಮಂಜೂರಾತಿ ಸಂಖ್ಯೆ
1	ರೋಣ	ಬಾಲಕ	50
2	ಮುಶಿಗೇರಿ	ಬಾಲಕ	50
3	ಗಜೇಂದ್ರಗಡ	ಬಾಲಕ	50
4	ಹಿರೇಹಾಳ	ಬಾಲಕ	50
5	ನರೇಗಲ್	ಬಾಲಕ	50
6	ಯರಬೆಲೇರಿ	ಬಾಲಕ	50
7	ಇಟಗಿ	ಬಾಲಕಿ	50

ಆ) ಹೌದು.

ಇ) 2004–05ನೇ ಸಾಲಿನಲ್ಲಿ ಜಿಲ್ಲಾ ಮಟ್ಟದ ಟೆಂಡರ್ ಕಮಿಟಿ, ಗದಗ್‌ರವರು ಇಲಾಖೆಯ ಸಂಸ್ಥೆಗಳಿಗೆ ಆಹಾರ ಧಾನ್ಯ ಮತ್ತು ಇತರೆ ಸಾಮಗ್ರಿಗಳನ್ನು ಪೂರೈಸುವ ಸಂಸ್ಥೆ ಶ್ರೀ ಬನಶಂಕರಿ ಮಹಿಳಾ ಸಹಕಾರಿ ಸಂಘ, ರೋಣ ಇವರನ್ನು ಅನುಮೋದಿಸಿರುತ್ತದೆ. ಆದರೆ ಸದರಿ ಸಂಸ್ಥೆಯವರು ಪ್ರಾರಂಭದಲ್ಲಿ ಕೆಲವು ದಿನಗಳ ಮಟ್ಟಿಗೆ ಪೂರೈಕೆಯಲ್ಲಿ ವಿಳಂಬ ಮಾಡಿರುತ್ತಾರೆ. ಈ ಸಂಬಂಧ ಗುತ್ತಿಗೆದಾರರಿಗೆ ನೋಟೀಸ್ ನೀಡಿದ್ದು. ತದನಂತರ, ಸಕಾಲದಲ್ಲಿ ಆಹಾರ ಸಾಮಗ್ರಿಗಳನ್ನು ಪೂರೈಸಿರುತ್ತಾರೆ. 2005–06ನೇ ಸಾಲಿನಲ್ಲಿಯೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಗದಗ್‌ರವರು ಸದರಿ ಸಂಸ್ಥೆಗೆ ಆಹಾರ ಸಾಮಗ್ರಿಗಳನ್ನು ಪೂರೈಸಲು ಆದೇಶಿಸಿದ್ದು, ಪ್ರಸ್ತುತ ಈ ಸಂಸ್ಥೆಯು ಸಕಾಲದಲ್ಲಿ ಸರಬರಾಜುಗೊಳಿಸುತ್ತಿದೆ.

4649 (5490) ಶ್ರೀ ಕಳಕಪ್ಪ ಗುರುಶಾಂತಪ್ಪ ಬಂಡಿ (ರೋಣ) :– ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೋಣ ತಾಲ್ಲೂಕಿನಲ್ಲಿ ಪಶು ಚಿಕಿತ್ಸಾ ಕೇಂದ್ರಗಳು ಎಷ್ಟಿವೆ;

ಆ) ಅವುಗಳಲ್ಲಿರುವ ಪಶು ವೈದ್ಯಾಧಿಕಾರಿಗಳು ಹಾಗೂ ಇತರೆ ಹುದ್ದೆಗಳು ಎಷ್ಟು;

ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ?